ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	674
ಮಾನ್ಯ ಸದಸ್ಯರ ಹೆಸರು	:	ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ	:	04.03.2021
ಉತ್ತರಿಸುವವರು	:	ಮಾನ್ಯ ಮುಖ್ಯಮಂತ್ರಿಗಳು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ದಿನಾಂಕ 01.04.2006ರ ನಂತರ ನೇಮಕವಾಗಿರುವ ನೌಕರರ ಎನ್.ಪಿ.ಎಸ್ (NPS) ರದ್ದತಿಗೊಳಿಸಿ, ಹಳೆಯ ಪಿಂಚಣಿ ಯೋಜನೆ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ನೂತನ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿಲ್ಲ. ನೂತನ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ/ ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರನ್ವಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದ್ದು, ಸಮಿತಿಯ ವರದಿಯನ್ನು ನಿರೀಕ್ಷಿಸಿದೆ.
ಆ)	ದಿನಾಂಕ:01.04.2006ರ ನಂತರ ನೇಮಕವಾಗಿರುವ ಎನ್.ಪಿ.ಎಸ್ ನೌಕರರನ್ನು ಮಲತಾಯಿಯಂತೆ ನಡೆಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮರಣ ಮತ್ತು ನಿವೃತ್ತಿ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು 6ನೇ ವೇತನ ಆಯೋಗದಲ್ಲಿ ನೀಡಿದ್ದರೂ ಸ್ಪಷ್ಟ ಸರ್ಕಾರಿ ಆದೇಶ, ಮಾರ್ಗಸೂಚಿಗಳಿಲ್ಲದೇ ಮರಣ ಮತ್ತು ನಿವೃತ್ತಿ ಹೊಂದಿದ ನೌಕರರ ಮತ್ತು ಅವರ ಕುಟುಂಬಗಳು ಸದರಿ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಇಲ್ಲ. ಸರ್ಕಾರದ ಆದೇಶ ಸಂಖ್ಯೆ: ಆಇ 34 ಪಿಇಎನ್ 2018, ದಿನಾಂಕ: 23.06.2018ರನ್ವಯ ಮರಣ ಮತ್ತು ನಿವೃತ್ತಿ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ದಿನಾಂಕ: 01.04.2018 ರಿಂದ ವಿಸ್ತರಿಸಲಾಗಿದ್ದು, ಮೇಲ್ಕಂಡ ಸೌಲಭ್ಯಗಳಿಗೆ ಕಾರ್ಯವಿಧಾನವನ್ನು ರಚಿಸಿ ಕೆಲವು ಮಾರ್ಗಸೂಚಿಗಳನ್ನು ಹೊರಡಿಸಲು ಸರ್ಕಾರವು ಪರಿಶೀಲಿಸುತ್ತಿದೆ.

ಆಇ 42 ಪಿಇಎನ್ 2021

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ